**<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಜೇವರಗಿ</u>**

**<u>CC No.172/2024</u>**

| | | |
|---|---|---|
| ಪಿರ್ಯಾದಿದಾರಃ | 1. | ಕರ್ನಾಟಕ ಸರ್ಕಾರದ ಪರ ಜೇವರಗಿ ಪೋಲಿಸ ಠಾಣೆ |

**ವಿರುದ್ಧ**

| | | |
|---|---|---|
| ಆರೋಪಿ | 1 | ಲಲಿತಾಬಾಯಿ ಗಂಡ ಮಲ್ಲಿಕಾರ್ಜುನ ಮಡಿವಾಳಕರ್,<br>ವಃ 36 ವರ್ಷ ಉಃ ಇಸ್ತ್ರಿ ವ್ಯಾಪಾರ,<br>ಸಾಃ ವಿದ್ಯಾನಗರ ಜೇವರ್ಗಿ, ತಾ. ಜೇವರ್ಗಿ, ಜಿಃ ಕಲ್ಬುರ್ಗಿ. |

**ದೋಷಾರೋಪಣೆ**

ಶ್ರೀಮತಿ ತಯ್ಯಬಾ ಸುಲ್ತಾನಾ, ಬಿ.ಎ., ಎಲ್‌ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ನಾನು, ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ

ದಿನಾಂಕ 24-03-2024ರಂದು ಸಂಜೆ 05-00 ಸಮಯದಲ್ಲಿ ಜೇವರಗಿ ಪೋಲಿಸ ಠಾಣಾ ವ್ಯಾಪ್ತಿಯ, ಜೇವರ್ಗಿ ಪಟ್ಟಣದ ಕನಕದಾಸ್ ಏರಿಯಾದ ಮಟನ್ ಮಾರ್ಕೆಟ್ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಿಗೆ ಹಾಗೂ ಲೈಸೆನ್ಸನ್ನು ಪಡೆಯದೆ ಅಕ್ರಮವಾಗಿ ಮದ್ಯದ ಪೌಚುಗಳನ್ನು ಇಟ್ಟುಕೊಂಡು ಮಾರಾಟ ಮಾಡುತ್ತಿದ್ದ ಕಾರಣ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮದ್ಯ ತುಂಬಿದ ಪೌಚುಗಳನ್ನು ಇಟ್ಟುಕೊಂಡು ಮಾರಾಟ ಮಾಡಲು ಸಂಗ್ರಹಿಸಿ ನಿಮ್ಮ ಸ್ವಾಧೀನದಲ್ಲಿಟ್ಟುಕೊಂಡ ಕಾರಣ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೇಲ್ಕಂಡ ಆಪಾದನೆಗೆ ಆರೋಪಿಯಾದ ನಿಮ್ಮನ್ನು ನ್ಯಾಯಾಲಯದ ಅಧಿವಿಚಾರಣೆಯನ್ನು ಎದುರಿಸಬೇಕೆಂದು ಆದೇಶಿಸುತ್ತೇನೆ.

ದಿನಾಂಕಃ 28-11-2025

(ಶ್ರೀಮತಿ ತಯ್ಯಬಾ ಸುಲ್ತಾನಾ)
ಹಿರಿಯ ಶ್ರೇಣಿ ಸಿವಿಲ್ ನ್ಯಾಯಾದೀಶರು ಮತ್ತು ಪ್ರಥಮ ದರ್ಜೆ
ನ್ಯಾಯಿಕ ದಂಡಾಧಿಕಾರಿಗಳು, ಜೇವರ್ಗಿ